**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/46/ಯುವನಿಧಿ/2023-24/ವಿ.ವೇ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು,ದಿನಾಂಕ:03.01.2025.

**ಸುತ್ತೋಲೆ**

**ವಿಷಯ:** ಯುವನಿಧಿ ವಿಶೇಷ ನೋಂದಣಿ ಅಭಿಯಾನವನ್ನು ದಿನಾಂಕ:06.01.2025 ರಿಂದ 20.01.2025 ರವರೆಗೆ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯ ಕಾಲೇಜುಗಳಲ್ಲಿ ಆಯೋಜಿಸುವ ಕುರಿತು.

**ಉಲ್ಲೇಖ:** ದಿನಾಂಕ:02.01.2025ರ ಕೈಗಾರಿಕ ತರಬೇತಿ ಮತ್ತು ಉದ್ಯೋಗ ಇಲಾಖೆಯ ಆಯುಕ್ತರ ಪತ್ರ ಸಂಖ್ಯೆ: ಕೈತಉ/ಉದ್ಯೋಗ/ಯೋಜನೆ-9/ ವಿವ-96/2024-25.

*****

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಸರ್ಕಾರದ ಖಾತರಿ ಯೋಜನೆಗಳಲ್ಲಿ ಒಂದಾದ ಯುವನಿಧಿ ಯೋಜನೆ ರಾಜ್ಯದ ನಿರುದ್ಯೋಗಿ ಯುವಕ/ಯುವತಿಯರಿಗೆ ನಿರುದ್ಯೋಗಿ ಭತ್ಯೆಯನ್ನು ನೀಡಿ ಸಬಲೀಕರಣಗೊಳಿಸಲು ಜಾರಿಗೊಳಿಸಿದ ಮಹತ್ತರ ಯೋಜನೆಯಾಗಿರುತ್ತದೆ. ಈ ಯೋಜನೆಯಡಿ ನೋಂದಣಿ ಆಗುವ ಪದವೀಧರರಿಗೆ/ಸ್ನಾತಕೋತ್ತರ ಪದವೀಧರರಿಗೆ ಮಾಹೆಯಾನ ರೂ.3000/- ಮತ್ತು ಡಿಪ್ಲೋಮಾ(6 ಬೋರ್ಡ್‌ಗಳಿಂದ) ತೇರ್ಗಡೆಯಾದವರಿಗೆ ಮಾಹೆಯಾನ ರೂ.1500/- ನಿರುದ್ಯೋಗ ಭತ್ಯೆಯನ್ನು ನೇರ ನಗದು ವರ್ಗಾವಣೆ ಮೂಲಕ ಪಾವತಿಸಲಾಗುತ್ತಿದೆ.

2023-24 ನೇ ಸಾಲಿನಲ್ಲಿ ತೇರ್ಗಡೆಯಾದ 527273 ಅಭ್ಯರ್ಥಿಗಳ ದತ್ತಾಂಶವು ನ್ಯಾಡ್ ಪೋರ್ಟಲ್ ನಲ್ಲಿಅಪ್ ಲೋಡ್ ಆಗಿದ್ದರೂ ಸಹ ನಿರೀಕ್ಷಿತ ಮಟ್ಟದಲ್ಲಿ ಯುವನಿಧಿ ಯೋಜನೆಗೆ ಅಭ್ಯರ್ಥಿಗಳು ನೋಂದಣಿಯಾಗಿರುವುದಿಲ್ಲ. ಈ ಹಿನ್ನಲೆಯಲ್ಲಿ ಯುವನಿಧಿ ಯೋಜನೆಗೆ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಅರ್ಹ ಅಭ್ಯರ್ಥಿಗಳನ್ನು ನೋಂದಾಯಿಸಲು **"ಯುವನಿಧಿ ವಿಶೇಷ ನೋಂದಣಿ ಅಭಿಯಾನವನ್ನು ದಿನಾಂಕ:06.01.2025 ರಿಂದ 20.01.2025ರ** ವರೆಗೆ ಹಮ್ಮಿಕೊಳ್ಳಲಾಗಿದ್ದು ಅಭ್ಯರ್ಥಿಗಳು ಈ ಕೆಳಕಂಡ ಅರ್ಹತೆಗಳನ್ನು ಹೊಂದಿರಬೇಕಾಗಿದೆ.

- ಕರ್ನಾಟಕದಲ್ಲಿ ವಾಸವಿರುವವರು (ಕನಿಷ್ಠ 06 ವರ್ಷಗಳ ವರೆಗೆ ಪದವಿ/ಸ್ನಾತಕೋತ್ತರ ಪದವಿ ಮತ್ತು ಡಿಪ್ಲೊಮದವರೆಗೆ ಅಧ್ಯಯನ ಮಾಡಿದವರು)
- ತೇರ್ಗಡೆ ಹೊಂದಿರುವ 180 ದಿನಗಳ ನಂತರವೂ ಉದ್ಯೋಗ ದೊರಕದೆ, ಉನ್ನತ ವ್ಯಾಸಂಗಕ್ಕೆ ದಾಖಲಾಗದೆ ಇರುವ ಅಭ್ಯರ್ಥಿಗಳು ಈ ಯೋಜನೆಗೆ ಅರ್ಹರಿರುತ್ತಾರೆ.
- ಸ್ವಯಂ ಉದ್ಯೋಗ ಹೊಂದಿಲ್ಲದ ಅಭ್ಯರ್ಥಿಗಳು.
- ಉನ್ನತ ವಿದ್ಯಾಭ್ಯಾಸ ಮುಂದುವರಿಸದೇ ಇರುವ ಅಭ್ಯರ್ಥಿಗಳು.

ಈ ಹಿನ್ನೆಲೆಯಲ್ಲಿ ಇಲಾಖಾ ವ್ಯಾಪ್ತಿಯ ಎಲ್ಲಾ ಪದವಿ/ ಸ್ನಾತಕೋತ್ತರ ಪದವಿ, ಇಂಜಿನಿಯರಿಂಗ್ ಹಾಗೂ ಡಿಪ್ಲೋಮ ಕಾಲೇಜುಗಳ ಪ್ರಾಂಶುಪಾಲರುಗಳು 2023 ಹಾಗೂ 2024 ನೇ ಸಾಲಿನಲ್ಲಿ ತಮ್ಮ ಕಾಲೇಜುಗಳಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳ ನೋಂದಣಿಗಾಗಿ ತಮ್ಮ ಕಾಲೇಜುಗಳಲ್ಲಿ **ಯುವನಿಧಿ ವಿಶೇಷ ನೋಂದಣಿ ಸಹಾಯ ಕೇಂದ್ರಗಳನ್ನು** ತೆರೆದು, ಕೇಂದ್ರಕ್ಕೆ ಅತ್ಯವಶ್ಯಕವಾಗಿ ಬೇಕಾದ ಗಣಕ ಯಂತ್ರ ವ್ಯವಸ್ಥೆ ಹಾಗೂ ಸಿಬ್ಬಂದಿ ನಿಯೋಜನೆ ಮಾಡಿಕೊಳ್ಳಲು ಸೂಚಿಸಲಾಗಿದೆ. ಕಾಲೇಜು ಹಾಗೂ ಸ್ಥಳೀಯ ಮಟ್ಟದಲ್ಲಿ ಬ್ಯಾನರ್/ಪೋಸ್ಟರ್‌ಗಳನ್ನು ಅಳವಡಿಸಿ, ವ್ಯಾಪಕ ಪ್ರಚಾರವನ್ನು ಕೈಗೊಂಡು ಅರ್ಹ ಅಭ್ಯರ್ಥಿಗಳಿಂದ ಗರಿಷ್ಠ ಮಟ್ಟದ ನೋಂದಣಿ ಮಾಡಿಸುವಂತೆ ಕ್ರಮ ವಹಿಸಲು ಸೂಚಿಸಲಾಗಿದೆ.

ಕಾಲೇಜುಗಳಲ್ಲಿ ಪ್ರಾಂಶುಪಾಲರು ಯುವನಿಧಿ ವಿಶೇಷ ನೋಂದಣಿ ಅಭಿಯಾನಕ್ಕಾಗಿ ಕಾಲೇಜಿನ ಪ್ಲೇಸ್‌ಮೆಂಟ್ ಸೆಲ್ ಅಧಿಕಾರಿಗಳು ಹಾಗೂ ಐ.ಟಿ ಕೋ-ಆರ್ಡಿನೇಟರ್ ಗಳಿಗೆ ಉಸ್ತುವರಿಯನ್ನು ವಹಿಸಿ ಅರ್ಹ ಅಭ್ಯರ್ಥಿಗಳಿಂದ ಅತಿ ಹೆಚ್ಚು ನೋಂದಣಿ ಮಾಡಿಕೊಳ್ಳಲು ಅನುಕೂಲ ಕಲ್ಪಿಸುವಂತೆ ಈ ಮೂಲಕ ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಯುವನಿಧಿ ಯೋಜನೆಯ ವೆಬ್‌ಸೈಟನ್ನು ಸಂಪರ್ಕಿಸುವುದು: https://yuvanidhischeme.in/

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

**ಇವರಿಗೆ,**

1. ಪ್ರಾದೇಶಿಕ ಜಂಟಿ ನಿರ್ದೇಶಕರುಗಳು, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ – ಸಂಬಂಧಪಟ್ಟ ಕಾಲೇಜುಗಳಿಗೆ ಸೂಕ್ತ ನಿರ್ದೇಶನ ನೀಡಲು ಕೋರಿದೆ.
2. ಇಲಾಖಾ ವ್ಯಾಪ್ತಿಯ ಎಲ್ಲಾ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಅಗತ್ಯ ಕ್ರಮಕ್ಕಾಗಿ.
3. ಇಲಾಖಾ ವ್ಯಾಪ್ತಿಯ ಎಲ್ಲಾ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಅಗತ್ಯ ಕ್ರಮಕ್ಕಾಗಿ.
4. ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಜಾಲತಾಣದಲ್ಲಿ ಪ್ರಕಟಿಸಲು.
5. ಕಛೇರಿ ಪ್ರತಿ.



ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ

ಕರ್ನಾಟಕ ಸರ್ಕಾರ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ
ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ



ಶ್ರೀ ಡಿ.ಕೆ. ಶಿವಕುಮಾರ್
ಸನ್ಮಾನ್ಯ ಉಪಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ


# ಯುವನಿಧಿ

ಯುವ ಜನತೆಯ ಉಜ್ವಲ
ಭವಿಷ್ಯಕ್ಕಾಗಿ ಕರ್ನಾಟಕ ಸರ್ಕಾರದ
ಗ್ಯಾರಂಟಿ ಯೋಜನೆ

## 2024ರ ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆ ಆರಂಭ

**ಪ್ರತೀ ತಿಂಗಳು ನಿರುದ್ಯೋಗ ಭತ್ಯೆ**

| ₹3000 | ₹1500 |
|---|---|
| ಪದವಿ ಹಾಗೂ ಸ್ನಾತಕೋತ್ತರ ಪದವೀಧರರಿಗೆ | ಡಿಪ್ಲೊಮಾ ತೇರ್ಗಡೆಯಾದವರಿಗೆ |



ಡಾ. ಶರಣ್ ಪ್ರಕಾಶ್ ಆರ್ ಪಾಟೀಲ್
ಮಾನ್ಯ ಸಚಿವರು, ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ

**ಅರ್ಹತೆಗಳು:**

1. 2023 ಹಾಗೂ 2024 ರಲ್ಲಿ ಪದವಿ / ಸ್ನಾತಕೋತ್ತರ ಪದವಿ / ಡಿಪ್ಲೋಮಾ ಉತ್ತೀರ್ಣರಾದ ವಿದ್ಯಾರ್ಥಿಗಳು
2. ಪದವಿ / ಸ್ನಾತಕೋತ್ತರ ಪದವಿ / ಡಿಪ್ಲೋಮಾ ನಂತರ ಕನಿಷ್ಠ 6 ತಿಂಗಳ ಅವಧಿಯವರೆಗೆ ಸರ್ಕಾರಿ/ ಖಾಸಗಿ ಉದ್ಯೋಗ ಹೊಂದಿಲ್ಲದವರು
3. ಸ್ವಯಂ ಉದ್ಯೋಗ ಹೊಂದಿಲ್ಲದವರು
4. ಉನ್ನತ ವಿದ್ಯಾಭ್ಯಾಸ ಮುಂದುವರಿಸದೇ ಇರುವವರು
5. ಕರ್ನಾಟಕದಲ್ಲಿ ವಾಸವಿರುವವರು (ಕನಿಷ್ಠ 6 ವರ್ಷಗಳವರೆಗೆ ಪದವಿ / ಸ್ನಾತಕೋತ್ತರ ಪದವಿ / ಡಿಪ್ಲೋಮಾದವರೆಗೆ ಅಧ್ಯಯನ ಮಾಡಿದವರು)

ನೋಂದಣಿಗೆ ಅಗತ್ಯವಿರುವ ದಾಖಲಾತಿಗಳು

ಎಸ್.ಎಸ್.ಎಲ್.ಸಿ. / ಪಿಯುಸಿ / ಪದವಿ / ಸ್ನಾತಕೋತ್ತರ ಪದವಿ / ಡಿಪ್ಲೋಮಾ ಪ್ರಮಾಣ ಪತ್ರ

**ಪ್ರತಿ ಮಾಹೆ ದಿನಾಂಕ 1 ರಿಂದ 25 ರೊಳಗೆ ಮಾಸಿಕ ಸ್ವಯಂ ಘೋಷಣೆ ನೀಡುವುದು ಕಡ್ಡಾಯ**

ಂದಾಯಿಸಿಕೊಳ್ಳಲು ಸೇವಾ ಸಿಂಧು ಪೋರ್ಟಲ್
ps://sevasindhugs.karnataka.gov.in ಗೆ ಭೇಟಿ ನೀಡಿ.

ಸಹಾಯವಾಣಿ
1800-599-7154

ತಕೋತ್ತರ ಪದವಿ/ಡಿಪ್ಲೋಮಾ ಪ್ರಮಾಣ ಪತ್ರಗಳನ್ನು ನ್ಯಾಡ್ ಪೋರ್ಟಲ್‌ನಲ್ಲಿ ಇಂದೀಕರಿಸಿರುವುದನ್ನು ಖಚಿತಪಡಿಸಿಕೊಳ್ಳುವುದು. https://nad.karnataka.gov.in/

ಉಚಿತವಾಗಿ ಕರ್ನಾಟಕ ಒನ್, ಗ್ರಾಮ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಕೂಡ ಅರ್ಜಿ ಸಲ್ಲಿಸಬಹುದು.

ೋಂದಣಿಯಲ್ಲಿ ಆಧಾರ್ ಸೀಡೆಡ್ ಬ್ಯಾಂಕ್ ಖಾತೆ, ಆಧಾರ್ ಕಾರ್ಡ್ ಹಾಗೂ ಆಧಾರ್ ಲಿಂಕ್ಡ್ ಮೊಬೈಲ್ ಸಂಖ್ಯೆಯ ವಿವರ ನೀಡಬೇಕು.

ನಿಸಿ: COMMISSIONERATE OF ITE   COMMISSIONERATE OF INDUSTRIAL TRAINING AND EMPLOYMENT   COMMISSIONERATE OF ITE   COMMISSIONERATE_ITE

**ಆಯುಕ್ತರ ಕಛೇರಿ, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ**
**ಕೌಶಲ್ಯ ಭವನ, ಡೈರಿ ವೃತ್ತ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-560 029.**
**ದೂರವಾಣಿ ಸಂಖ್ಯೆ:080-25189112** **ಇ-ಮೇಲ್ ವಿಳಾಸ:detempkar@gmail.com**

ಸಂಖ್ಯೆ: ಕೈತ ಉ/ಉದ್ಯೋಗ/ಯೋಜನೆ-9/ವಿವ- 96 /2024-25 ದಿನಾಂಕ: 02-01-2025.

**ಗೆ,**
ಆಯುಕ್ತರು,
ಕಾಲೇಜು ಶಿಕ್ಷಣ ಇಲಾಖೆ,
ನೃಪತುಂಗ ರಸ್ತೆ,
**ಬೆಂಗಳೂರು-01.**

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರು
ಅಷ್ಟ ಶಾಖೆ.
ಸಂಖ್ಯೆ..........................
ದಿನಾಂಕ..........................

ಮಾನ್ಯರೆ,

ವಿಷಯ: ಯುವನಿಧಿ ವಿಶೇಷ ನೋಂದಣಿ ಅಭಿಯಾನ ಆಯೋಜಿಸಿರುವ ಕುರಿತು.
ಉಲ್ಲೇಖ: ದಿನಾಂಕ: 02-01-2025 ರಂದು ಜರುಗಿದ ಸಭೆಯಲ್ಲಿ ಚರ್ಚಿಸಿದಂತೆ.

0-0

ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಸರ್ಕಾರದ ಐದು ಖಾತರಿ ಯೋಜನೆಗಳಲ್ಲಿ ಒಂದಾದ ಯುವನಿಧಿ ಯೋಜನೆಯು ರಾಜ್ಯದ ನಿರುದ್ಯೋಗಿ ಯುವಕ/ ಯುವತಿಯರಿಗೆ ನಿರುದ್ಯೋಗ ಭತ್ಯೆಯನ್ನು ನೀಡಿ ಸಬಲೀಕರಣಗೊಳಿಸಲು ಜಾರಿಗೊಳಿಸಿರುವ ಮಹತ್ತರ ಯೋಜನೆಯಾಗಿರುತ್ತದೆ. ಕನಿಷ್ಟ 6 ವರ್ಷಗಳ ಕರ್ನಾಟಕದ ರಹವಾಸಿ ಆಗಿರುವ ,2023 ಮತ್ತು 2024 ರ ಸಾಲಿನಲ್ಲಿ ಪದವಿ/ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮಾ ತೇರ್ಗಡೆ ಹೊಂದಿರುವ, 180 ದಿನಗಳ ನಂತರವೂ ಉದ್ಯೋಗ ದೊರಕದೇ ಇರುವ , ಉನ್ನತ ವ್ಯಾಸಂಗಕ್ಕೆ ದಾಖಲಾಗದೇ ಇರುವ ಅಭ್ಯರ್ಥಿಗಳು ಈ ಯೋಜನೆಗೆ ಅರ್ಹರಾಗಿರುತ್ತಾರೆ. ಪದವೀಧರರಿಗೆ/ ಸ್ನಾತಕೋತ್ತರ ಪದವೀಧರರಿಗೆ ಮಾಹೆವಾರು ರೂ.3,000/- ಮತ್ತು ಡಿಪ್ಲೋಮಾ (6 ಬೋರ್ಡ್‌ಗಳಿಂದ) ತೇರ್ಗಡೆಯಾದವರಿಗೆ ಮಾಹೆವಾರು ರೂ.1,500/- ನಿರುದ್ಯೋಗ ಭತ್ಯೆಯನ್ನು ನೇರ ನಗದು ವರ್ಗಾವಣೆ ಮೂಲಕ ಪಾವತಿಸಲಾಗುತ್ತಿದೆ.

ಮುಂದುವರೆದಂತೆ, 2023-24ನೇ ಸಾಲಿನಲ್ಲಿ ತೇರ್ಗಡೆಯಾದ 527273 ಅಭ್ಯರ್ಥಿಗಳ ದತ್ತಾಂಶವು ನ್ಯಾಡ್ ಪೋರ್ಟಲ್ ನಲ್ಲಿ ಅಪ್ ಲೋಡ್ ಆಗಿದ್ದರೂ ಸಹ ನಿರೀಕ್ಷಿತ ಮಟ್ಟದಲ್ಲಿ ಯುವನಿಧಿ ಯೋಜನೆಗೆ ನೋಂದಣಿಯಾಗಿರುವುದಿಲ್ಲ. ಈ ಹಿನ್ನೆಲೆಯಲ್ಲಿ, ಯುವನಿಧಿ ಯೋಜನೆಗೆ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಅರ್ಹ ಅಭ್ಯರ್ಥಿಗಳನ್ನು ನೋಂದಾಯಿಸುವಂತಾಗಲು **" ವಿಶೇಷ ನೋಂದಣಿ ಅಭಿಯಾನವನ್ನು ದಿನಾಂಕ: 06-01-2025 ರಿಂದ 20-01-2025 ರವರೆಗೆ"** ಹಮ್ಮಿಕೊಳ್ಳಲಾಗಿದೆ. ಸದರಿ ನೋಂದಣಿ ಸಹಾಯ ಕೇಂದ್ರಗಳನ್ನು ವಿಶ್ವವಿದ್ಯಾಲಯಗಳಲ್ಲಿ ಹಾಗೂ ಕಾಲೇಜುಗಳಲ್ಲಿ ತೆರೆಯ ಬೇಕಾಗಿರುವುದರಿಂದ, ಇಂತಹ ಕೇಂದ್ರಗಳಲ್ಲಿ ಗಣಕ ಯಂತ್ರ ವ್ಯವಸ್ಥೆ ಹಾಗೂ ಸಿಬ್ಬಂದಿ ನೇಮಕಾತಿ ಮಾಡಬೇಕಾಗಿದ್ದು, ತಮ್ಮ ವ್ಯಾಪ್ತಿಯಲ್ಲಿನ ವಿಶ್ವವಿದ್ಯಾಲಯಗಳಿಗೆ ಹಾಗೂ ಕಾಲೇಜುಗಳಿಗೆ ಪೂರ್ಣ ಪ್ರಮಾಣದ ಪಾಲ್ಗೊಳ್ಳುವಿಕೆಯ ಕುರಿತು ಸೂಕ್ತ ನಿರ್ದೇಶನವನ್ನು ನೀಡಲು ಕೋರಲಾಗಿದೆ.

ತಮ್ಮ ವಿಶ್ವಾಸಿ,

ಆಯುಕ್ತರು,
ಕೈಗಾರಿಕಾ ತರಬೇತಿ ಮತ್ತು ಉದ್ಯೋಗ.

F:\Emp-9\2023-24\ಯುವನಿಧಿ\letters\Lr- DDPI.docx